ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೭

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಬುಧವಾರ, ದಿನಾಂಕ: ೧೧ನೇ ಫೆಬ್ರವರಿ, ೨೦೧೫**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ವರಾಹಿ ನೀರಾವರಿ ಯೋಜನೆ C.E. ಮತ್ತು S.E. ಎರಡು ಹುದ್ದೆಗಳನ್ನು ಏಕ ವ್ಯಕ್ತಿ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೧ (೯೧೪) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೩೫ ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ವರಾಹಿ ನೀರಾವರಿ ಯೋಜನೆಗೆ ಮುಖ್ಯ ಅಭಿಯಂತರರಿಲ್ಲದೆ ಕಾಮಗಾರಿಗಳು ಮಂದಗತಿಯಲ್ಲಿ ಸಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; Superintendent Engineer ಮತ್ತು Chief Engineer ಎರಡು ಹುದ್ದೆಗೆ ಏಕ ವ್ಯಕ್ತಿ ಕಾರ್ಯ ನಿರ್ವಹಿಸುತ್ತಿರುವುದರ ಹಿನ್ನೆಲೆ ಏನು;

(ಆ) ವರಾಹಿ ನೀರಾವರಿ ಯೋಜನೆಯ ಮೂಲ ಅಂದಾಜಿನಂತೆ ಸ್ವಾಧೀನ ಪಡಿಸಿಕೊಳ್ಳಲು ಇಚ್ಚಿಸಿರುವ ಅರಣ್ಯ ಭೂಮಿ ೨೭೧ ಎಕರೆಯಾಗಿದ್ದು ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯಿಂದ ಅನುಮತಿ ದೊರೆತಿದ್ದು ೩೬೨.೫೦ ಎಕರೆಯಾಗಿದ್ದರೂ ಸಹ, ಕಾಲುವೆಗಳ ಉದ್ದವನ್ನು ಮೂಲ ಯೋಜನೆಯ ಅಂದಾಜಿಗಿಂತ ಕಡಿಮೆ ಮಾಡಲು ಕಾರಣವೇನು; ಕಾಲುವೆಗಳ ಉದ್ದವನ್ನು ಮೂಲ ಯೋಜನೆಗಿಂತ ಕಡಿಮೆ ಮಾಡುವುದರ ಮೂಲಕ ಯೋಜನಾ ಪ್ರದೇಶದಲ್ಲಿರುವ ಖಾಸಗಿ ವಿದ್ಯುತ್ ಉತ್ಪಾದನಾ ಘಟಕಕ್ಕೆ ಅನುಕೂಲ ಮಾಡಿಕೊಟ್ಟಂತಾಗಿರುವುದಿಲ್ಲವೆ; ಇಲ್ಲವಾದಲ್ಲಿ, ಮೂಲ ಯೋಜನೆಗಿಂತ ಕಾಲುವೆಗಳ ಉದ್ದವನ್ನು ಕಡಿಮೆ ಮಾಡಿರುವ ಉದ್ದೇಶವೇನು;

(ಇ) ಅರಣ್ಯ ಇಲಾಖೆಯನ್ನು ಹೊಣೆಯಾಗಿಸಿ, ಕಾಲುವೆಯ ಉದ್ದವನ್ನು ಕಡಿಮೆಗೊಳಿಸಲು ಉದ್ದೇಶ ಹೊಂದಿರುವ ಇಲಾಖಾ ಹಿರಿಯ ಅಧಿಕಾರಿಗಳ ಹುನ್ನಾರವನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ?

## ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಯ ಸರ್ಕಾರಿ ಜಮೀನುಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೨ (೮೯೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇರುವ ಸರ್ಕಾರಿ ಜಮೀನಿನ ವಿಸ್ತೀರ್ಣ ಎಷ್ಟು;

(ಆ) ಈ ಜಮೀನುಗಳನ್ನು ಸರ್ವೆ ಮಾಡಲಾಗಿದೆಯೇ; ಆ ಪೈಕಿ ಅತಿಕ್ರಮ ಮಾಡಿಕೊಂಡಿರುವ ಸರ್ಕಾರಿ ಜಮೀನು ಎಷ್ಟು;

(ಇ) ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಡಾ: ಕಸ್ತೂರಿರಂಗನ್ ವರದಿ ಅನುಷ್ಠಾನ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)–**

೯೩ (೯೫೨) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಡಾ: ಕಸ್ತೂರಿರಂಗನ್ ವರದಿ ಅನುಷ್ಠಾನಗೊಂಡರೆ ಅರಣ್ಯ ಪ್ರದೇಶ ಮತ್ತು ರಾಷ್ಟ್ರೀಯ ಉದ್ಯಾನವನದಲ್ಲಿರುವ ಆವಾಸ ಸ್ಥಾನದಲ್ಲಿ ವಾಸಿಸುವಂತಹ ಜನರನ್ನು ಒಕ್ಕಲೆಬ್ಬಿಸುತ್ತಾರೆ ಎನ್ನುವ ಭೀತಿ ವರದಿಯಾಗಿತ್ತು ಇದು ಸರಿಯೇ; ವರದಿ ಅನುಷ್ಠಾನಗೊಂಡರೆ ಕೃಷಿಕರು ರಾಸಾಯನಿಕ ಗೊಬ್ಬರ, ಕೀಟನಾಶಕ ಬಳಸಲು ಹಾಗೂ ಗ್ರಾಮಗಳಲ್ಲಿ ಕೃಷಿ ತೋಟಗಾರಿಕೆ, ಪ್ಲಾಂಟೇಶನ್, ಕಾಫಿ ಬೆಳೆ ಬೆಳೆಸುವಂತಿಲ್ಲ ಎಂದು ವರದಿಯಲ್ಲಿ ನಿರ್ಬಂಧಿಸಿರುವುದು ಸರಿಯೇ;

(ಆ) ಡಾ: ಕಸ್ತೂರಿರಂಗನ್ ವರದಿ ಜಾರಿಗೆ ತಂದಲ್ಲಿ, ಶಾಲಾ, ಕಾಲೇಜು ಆಸ್ಪತ್ರೆಗಳನ್ನು ಕಟ್ಟುವಂತಿಲ್ಲ ಎಂಬ ಬಗ್ಗೆ ಆತಂಕಗಳಿದ್ದು, ಇದು ಸರಿಯೇ;

(ಇ) ಡಾ: ಕಸ್ತೂರಿರಂಗನ್ ವರದಿಯ ಸಾಧಕ–ಬಾಧಕಗಳನ್ನು ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಈ ಬಗ್ಗೆ ಸರ್ವೋಚ್ಚ ನ್ಯಾಯಾಲಯಕ್ಕೆ ಸರ್ಕಾರದ ಪರವಾಗಿ ರಾಜ್ಯದ ಜನರ ಬೇಡಿಕೆಗಳನ್ನು ಸಲ್ಲಿಸಲಾಗಿದೆಯೇ; ಹಾಗಿದ್ದರೆ, ವಿವರಣೆ ನೀಡುವುದು; ಈ ವರದಿಯು ಜಾರಿಗೊಂಡಲ್ಲಿ ಪಶ್ಚಿಮಘಟ್ಟ ಪ್ರದೇಶದಲ್ಲಿ ಜನಜೀವನದ ಮೇಲೆ ಉಂಟಾಗುವ ಪರಿಣಾಮಗಳೇನು? (ವಿವರ ನೀಡುವುದು)

## ಅರಣ್ಯ ಇಲಾಖೆಯಲ್ಲಿನ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೯೪ (೯೬೮) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಇಲಾಖೆಯಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮ ೩೨ರ ಅಡಿಯಲ್ಲಿ ನಿಯಮ ಬಾಹಿರವಾಗಿ ನೇಮಕಗೊಂಡು ಮುಂದುವರೆದಿರುವ ಅವ್ಯವಹಾರದ ತನಿಖೆಯ ವಿವರಗಳೇನು;

(ಆ) ಈ ಅವ್ಯವಹಾರದ ಕಾರಣಕ್ಕೆ ಯಾವ ಯಾವ ಸ್ಥರದ ಯಾರು ಯಾರು ಅಧಿಕಾರಿಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ?

## ಬಳ್ಳಾರಿಯಲ್ಲಿ ಕಿಯೋಸ್ಕ ಕೇಂದ್ರ ಚಾಲ್ತಿಯಲ್ಲಿರದ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೫ (೯೩೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಸರ್ವೆ ಇಲಾಖೆಯ ಕಿಯೋಸ್ಕ ಕೇಂದ್ರ ಅಂದಾಜು ಒಂದು ವರ್ಷದಿಂದ ಚಾಲ್ತಿಯಲ್ಲಿ ಇರದಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಇ) ನುರಿತ ಸಿಬ್ಬಂದಿಗಳ ಕೊರತೆಯಿಂದಾಗಿ ೧೧ಇ ಮತ್ತು ಪೋಡಿ ಪ್ರಕರಣಗಳು ತ್ವರಿತಗತಿಯಲ್ಲಿ ವಿಲೇವಾರಿ ಆಗುತ್ತಿಲ್ಲದಿರುವುದರಿಂದ ವಿಳಂಬವನ್ನು ತಡೆಗಟ್ಟಲು ಸರ್ಕಾರ ಯಾವ ತ್ವರಿತ ಕ್ರಮಗಳನ್ನು ಕೈಗೊಂಡಿದೆ?

## ವಿಕಲ ಚೇತನರಿಗೆ ಪಿಂಚಣಿ ನೀಡುವಾಗ ಆದಾಯದ ಪರಿಮಿತಿ ಕೈಬಿಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೬ (೯೨೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯ ಮೂಲಕ "ವಿಕಲ ಚೇತನ" ವೇತನ ಪಡೆಯುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕು–ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿಕಲಚೇತನರಿಗೆ ಮಾಸಿಕವಾಗಿ ಪಡೆಯುವ ಪಿಂಚಣಿಗೆ, ಆದಾಯದ ಮಿತಿ ಹೇರಿ, ಮಾಸಿಕ ಪಿಂಚಣಿ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬುದ್ಧಿ ಮಾಂದ್ಯರು ಹಾಗೂ ವಿಕಲಚೇತನರಿಗೆ ಪಿಂಚಣಿ ನೀಡುವಾಗ ವೈಯಕ್ತಿಕ ಹಾಗೂ ಕುಟುಂಬದ ಆದಾಯಕ್ಕೂ ವಿರಹಿತಪಡಿಸಬೇಕೆಂಬ ಬಗ್ಗೆ ಸರ್ಕಾರದ ನಿಲುವೇನು;

(ಈ) ಬದುಕಿನುದ್ದಕ್ಕೂ ಸಂಕಟಪಡುವ ಮಾನಸಿಕ ಹಾಗೂ ದೈಹಿಕ ವಿಕಲ ಚೇತನರಿಗೆ ಪಿಂಚಣಿ ನೀಡುವಾಗ ಆದಾಯದ ಪರಿಮಿತಿ ಕೈಬಿಡಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಕೆ.ಆರ್. ಪೇಟೆ ತಾಲ್ಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಕೆರೆಗಳಿಗೆ ನೀರೊದಗಿಸುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭ (೯೩೬) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣರಾಜಪೇಟೆ ತಾಲ್ಲೂಕಿನ ಬರಪೀಡಿತ ಪ್ರದೇಶವಾದ ಸಂತೇಬಾಚಹಳ್ಳಿ ಹೋಬಳಿಯ ಕೆರೆಗಳು ಮತ್ತು ಚನ್ನರಾಯಪಟ್ಟಣ ತಾಲ್ಲೂಕಿನ ಬೆಳಗೊಳ ಹೋಬಳಿಯ ಕೆರೆಗಳಿಗೆ ಜನಿವಾರ ಕೆರೆಯಿಂದ ನೀರೊದಗಿಸುವ "ಜುಟ್ಟನಹಳ್ಳಿ ಏತನೀರಾವರಿ ಯೋಜನೆ" ಯ ರೂಪುರೇಷೆಗಳನ್ನು ಅಂತಿಮಗೊಳಿಸಲಾಗಿದೆಯೇ; (ವಿವರಗಳನ್ನು ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ಹೋಬಳಿಗಳ ಯಾವ ಯಾವ ಕೆರೆಗಳಿಗೆ ನೀರನ್ನು ತುಂಬಿಸಲಾಗುವುದು; (ವಿವರ ಒದಗಿಸುವುದು)

(ಇ) ಈ ಯೋಜನೆಗೆ ತಾಂತ್ರಿಕ ಮತ್ತು ಆಡಳಿತಾತ್ಮಕ ಅನುಮೋದನೆ ದೊರಕಿದೆಯೇ; ಯೋಜನೆಯ ಅಂದಾಜು ಮೊತ್ತ ಎಷ್ಟು; ಪ್ರಸಕ್ತ ಸಾಲಿಗೆ ಒದಗಿಸಲಾಗಿರುವ ಅನುದಾನವೆಷ್ಟು; ಕಾಮಗಾರಿಗಳನ್ನು ಪ್ರಾರಂಭಿಸುವುದು ಯಾವಾಗ; (ವಿವರ ಒದಗಿಸುವುದು)

(ಈ) ಈ ಏತ ನೀರಾವರಿ ಯೋಜನೆಯಲ್ಲಿ ಶ್ರವಣಬೆಳಗೊಳ ಹೋಬಳಿಯ ಬೆಟ್ಟದಹಳ್ಳಿಯಿಂದ, ಸಂತೇಬಾಚಹಳ್ಳಿಯ ಒಡವಿನಹಳ್ಳಕ್ಕೆ ನೈಸರ್ಗಿಕ ಹರಿವಿನ ಮೂಲಕ ನೀರನ್ನು ಹರಿಸಿದರೆ, ಅದು ಸಂತೇಬಾಚಹಳ್ಳಿಯ ಚಿಕ್ಕೆರೆ ಮತ್ತು ದೇವನಕೆರೆ, ಹುಬ್ಬನಹಳ್ಳಿ ಕೆರೆ, ಲೋಕನಹಳ್ಳಿ ಕೆರೆ, ಮಾಳಗೂರು ಕೆರೆ, ಅಘಲಯ ಕೆರೆ, ನಾಗರಘಟ್ಟಕೆರೆ, ಚಿಕ್ಕಸೋಮನಹಳ್ಳಿ ಮತ್ತು ದೊಡ್ಡಸೋಮನಹಳ್ಳಿ ಕೆರೆಗಳವರೆಗೆ ನೈಸರ್ಗಿಕವಾಗಿ ಕೋಡಿಹಳ್ಳಗಳ ಮೂಲಕವೇ ಹರಿಯುವುದು ಸರ್ಕಾರದ ಗಮನದಲ್ಲಿದೆಯೇ;

(ಉ) ಈ ಪ್ರಕಾರವಾಗಿ ಯೋಜನೆಯನ್ನು ರೂಪಿಸಲಾಗಿದೆಯೇ; ರೂಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

## ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣ ನಿರ್ಮಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)–**

೯೮ (೯೭೪) ಯುವಜನ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ, ಮೈಸೂರು, ಹಾಸನ ಹಾಗೂ ಚಾಮರಾಜನಗರ ಜಿಲ್ಲಾ ವ್ಯಾಪ್ತಿಯ ತಾಲ್ಲೂಕು ಕೇಂದ್ರಗಳಲ್ಲಿ ಎಷ್ಟು ಕಡೆ ಕ್ರೀಡಾಂಗಣ ಇರುವುದಿಲ್ಲ;

(ಆ) ಸದರಿ ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣ ನಿರ್ಮಿಸಲು ಯೋಜನೆ ರೂಪಿಸಲಾಗಿದೆಯೇ; (ವಿವರ ಒದಗಿಸುವುದು)

(ಇ) ಹಾಗಾದರೆ, ಸದರಿ ಯೋಜನೆಯ ರೂಪುರೇಷೆಗಳೇನು;

(ಈ) ಯಾವ ಕಾಲಮಿತಿಯಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸಲಾಗುವುದು?

## ಒಳನಾಡು ಜಲಸಾರಿಗೆ ವ್ಯವಸ್ಥೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)–**

೯೯ (೮೭೫) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಳನಾಡು ಜಲಸಾರಿಗೆ ಮೂಲಕ ಸಂಪರ್ಕವಿರುವ ಗ್ರಾಮ ಮತ್ತು ಸ್ಥಳಗಳು ಎಷ್ಟು; ಅವು ಯಾವುವು;

(ಆ) ಶಿವಮೊಗ್ಗ ಜಿಲ್ಲೆ, ಸಾಗರ ತಾಲ್ಲೂಕಿನ, ಸಿಗಂದೂರಿನ ಚೌಡೇಶ್ವರಿ ದೇವಾಲಯಕ್ಕೆ ದರ್ಶನಕ್ಕಾಗಿ ಆಗಮಿಸುವ ಭಕ್ತಾದಿಗಳು ಈ ದೇವಾಲಯಕ್ಕೆ ಒಳನಾಡು ಜಲಸಾರಿಗೆ ವ್ಯವಸ್ಥೆ ಮೂಲಕ ತೆರಳಲು ಕೇವಲ ೪ ಲಾಂಚ್‌ಗಳಿದ್ದು, ಲಾಂಚ್‌ಗಳ ಕೊರತೆಯಿಂದ ಭಕ್ತಾದಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ / ಬಾರದಿದ್ದಲ್ಲಿ, ಲಾಂಚ್‌ಗಳನ್ನು ಹೆಚ್ಚು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ಲಾಂಚ್‌ಗಳ ಕೊರತೆಯಿಂದ ಸ್ಥಳೀಯರು ಮತ್ತು ಭಕ್ತಾದಿಗಳ ಮಧ್ಯೆ ದಿನನಿತ್ಯ ಘರ್ಷಣೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಡಾ: ವಿಷ್ಣುವರ್ಧನ್ ಸ್ಮಾರಕ ನಿರ್ಮಾಣ

**ಶ್ರೀ ಅಶ್ವತ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೦೦ (೯೭೯) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕನ್ನಡದ ಹೆಸರಾಂತ ಚಿತ್ರನಟ ಡಾ: ವಿಷ್ಣುವರ್ಧನ್‌ರವರ ಸ್ಮಾರಕ ನಿರ್ಮಾಣ ಮಾಡಲು ನೀಡಿರುವ ಜಾಗ ಮೀಸಲು ಅರಣ್ಯ ಪ್ರದೇಶದ ವ್ಯಾಪ್ತಿಗೆ ಬರುವುದೇ; ಹಾಗಿದ್ದರೆ, ಆ ಜಾಗದಲ್ಲಿ ಸ್ಮಾರಕ ನಿರ್ಮಾಣ ಮಾಡಲು ಅನುಮತಿ ನೀಡಿದವರು ಯಾರು;

(ಆ) ಸದರಿ ಜಾಗದ ವಿಚಾರವಾಗಿ ಅರಣ್ಯಾಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಪತ್ರಿಕೆಗಳಲ್ಲಿ ವರದಿಯಾಗಿದೆ ಇದು ಸರ್ಕಾರದ ಗಮನಕ್ಕೆ ಬಂದಿರುವುದೇ;

(ಇ) ಕನ್ನಡದ ಒಬ್ಬ ಶ್ರೇಷ್ಠ ನಟನ ಸ್ಮಾರಕ ನಿರ್ಮಾಣದ ವಿಷಯದಲ್ಲಿ ಅರಣ್ಯ/ಕಂದಾಯ/ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳು ಗೊಂದಲ ಸೃಷ್ಟಿಸಿ ಕನ್ನಡದ ಮೇರು ನಟನ ಅಭಿಮಾನಿಗಳಿಗೆ ನೋವುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)

## ರಾಜ್ಯದಲ್ಲಿ ನೂತನ ತಾಲ್ಲೂಕುಗಳ ರಚನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)–**

೧೦೧ (೯೩೦) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ನೂತನ ತಾಲ್ಲೂಕುಗಳನ್ನು ರಚಿಸಲು ಉದ್ದೇಶಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಎಷ್ಟು ನೂತನ ತಾಲ್ಲೂಕುಗಳನ್ನು ರಚಿಸಲಾಗುವುದು;

(ಇ) ಈ ತಾಲ್ಲೂಕುಗಳು ಯಾವಾಗ ಕಾರ್ಯಾರಂಭ ಮಾಡಲಿವೆ;

(ಈ) ರಾಜ್ಯದಲ್ಲಿ ಹೊಸದಾಗಿ ಉಪ ವಿಭಾಗಗಳನ್ನು ರಚಿಸುವ ಚಿಂತನೆ ಇದೆಯೇ;

(ಉ) ಇದ್ದಲ್ಲಿ, ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಯಲಬುರ್ಗಾ ತಾಲ್ಲೂಕಿನ ನೆಲಜೇರಿ ಕೆರೆಯ ಕಾಮಗಾರಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೦೨ (೯೪೫) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಪ್ಪಳ ಜಿಲ್ಲೆಯ, ಯಲಬುರ್ಗಾ ತಾಲ್ಲೂಕಿನ, ನೆಲಜೇರಿ ಕೆರೆಯ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು ಯಾವಾಗ;

(ಆ) ಸದರಿ ಕೆರೆಯ ಕಾಮಗಾರಿಗೆ ಖರ್ಚಾದ ಅನುದಾನದ ಪ್ರಮಾಣ ಎಷ್ಟು;

(ಇ) ಸದರಿ ಕೆರೆಯ ಗುತ್ತಿಗೆ ಕರಾರಿನನ್ವಯ ಕಾಮಗಾರಿಯನ್ನು ಯಾವ ದಿನಾಂಕಕ್ಕೆ ಲೋಕಾರ್ಪಣೆ ಮಾಡಬೇಕಿತ್ತು; ಇಲ್ಲವಾದಲ್ಲಿ, ವಿಳಂಬಕ್ಕೆ ಕಾರಣಗಳೇನು;

(ಈ) ಸದರಿ ಕೆರೆಯ ಕಾಮಗಾರಿಯು ಸದ್ಯ ಯಾವ ಹಂತದಲ್ಲಿದೆ;

(ಉ) ಪ್ರಸಕ್ತ ಸಾಲಿನಲ್ಲಿ ಕೆರೆಯ ದುರಸ್ಥಿಗಾಗಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು;

(ಊ) ದುರಸ್ಥಿ ಕಾಮಗಾರಿ ಇದುವರೆವಿಗೂ ಪ್ರಾರಂಭವಾಗದೇ ಇರುವುದಕ್ಕೆ ಕಾರಣವೇನು?

## ನೇಕಾರರಿಗೆ ೦%ನಲ್ಲಿ ಸಾಲ ಸಿಗಲು ಶಿಫಾರಸು ಕೋರಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)–**

೧೦೩ (೯೨೪) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ನೇಕಾರಿಕೆ ಮಾಡುವವರಿಗೆ ಜವಳಿ ಇಲಾಖೆಯಿಂದ ೦%ಗೆ ಸಾಲ ನೀಡುವಂತೆ ಸರ್ಕಾರಕ್ಕೆ ಶಿಫಾರಸು ಮಾಡಲಾಗಿದೆಯೇ;

(ಆ) ಈಗಾಗಲೇ ರೈತರಿಗೆ ೦% ಮಾಡಿರುವ ರೀತಿ ನೇಕಾರರಿಗೆ ೦% ನೀಡಲು ವಿಳಂಬವೇಕೆ;

(ಇ) ಈ ವರ್ಷದ ಆಯ–ವ್ಯಯದಲ್ಲಿ ರಾಜ್ಯದ ಬಡ ನೇಕಾರರಿಗೆ ಕನಿಷ್ಠ ೫ ಲಕ್ಷ ರೂ.ಗಳ ಮಿತಿಯವರೆಗೆ ೦%ಗೆ ಸಾಲ ಸಿಗುವಂತೆ ಶಿಫಾರಸ್ಸು ಮಾಡಲಾಗುವುದೇ?

## ಕಾಡು ಪ್ರಾಣಿಗಳಿಂದ ಬೆಳೆಹಾನಿ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೪ (೮೯೨) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರವಾರ ಜಿಲ್ಲೆಯ ಅರಣ್ಯ ಇಲಾಖೆಯ ಅಧೀನದಲ್ಲಿ ಬರುವ ವಿಭಾಗದಿಂದ ಕಳೆದ ೩ ವರ್ಷಗಳಲ್ಲಿ ಕಾಡು ಪ್ರಾಣಿಗಳಿಂದ ಬೆಳೆ ಹಾನಿಯಾಗಿ ಪರಿಹಾರ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ನೀಡಲಾದ ಪರಿಹಾರ ಮೊತ್ತವೆಷ್ಟು; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ಕಾರವಾರ ಜಿಲ್ಲೆಯ, ಜೋಯಿಡಾ ಹಾಗೂ ಹಳಿಯಾಳ ತಾಲ್ಲೂಕಿನ ಕೆಲವೊಂದು ಭಾಗಗಳಲ್ಲಿ ನಿರಂತರವಾಗಿ ಕಾಡಾನೆ ಹಾವಳಿಯಿಂದ ರೈತರು ಬೆಳೆದ ಬೆಳೆಗಳು ಸಂಪೂರ್ಣ ನಾಶವಾಗಿದ್ದು, ಇದಕ್ಕೆ ಅರಣ್ಯ ಇಲಾಖೆಯಿಂದ ನೀಡಿದ ಪರಿಹಾರದ ಮೊತ್ತ ಎಷ್ಟು; (ವಿವರ ನೀಡುವುದು) ಕಾಡಾನೆ ದಾಳಿಯಿಂದ ರೈತರ ಜೀವಕ್ಕೆ ಅಪಾಯವಾದ ಪ್ರಕರಣಗಳ ಸಂಖ್ಯೆ ಎಷ್ಟು; ಇಲಾಖೆಯಿಂದ ನೀಡಿದ ಪರಿಹಾರದ ಮೊತ್ತ ಎಷ್ಟು; (ದಿನಾಂಕ ೧–೧–೨೦೧೩ ರಿಂದ ೨೫–೧–೨೦೧೫ರವರೆಗಿನ ವಿವರ ನೀಡುವುದು)

(ಇ) ಈಗಾಗಲೇ ಜೋಯಿಡಾ ತಾಲ್ಲೂಕಿನ ಕೆಲವೊಂದು ಭಾಗದಲ್ಲಿ ಚಿರತೆ ಹಾಗೂ ಕರಡಿಗಳು ಪ್ರತ್ಯಕ್ಷವಾಗುತ್ತಿದ್ದು, ಇದರಿಂದ ರೈತರಿಗೆ ತೊಂದರೆಯಾಗುವ ಸಂಭವವಿರುವುದರಿಂದ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ? (ವಿವರ ನೀಡುವುದು)

## ಐ.ಟಿ.ಐ. ವಿದ್ಯಾರ್ಥಿಗಳಿಗೆ ನಿಗದಿತ ಸಮಯದಲ್ಲಿ ಪರೀಕ್ಷೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೦೫ (೮೬೮) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಐ.ಟಿ.ಐ. ಗಳ ಸಂಖ್ಯೆ ಎಷ್ಟು; ಇಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ಐ.ಟಿ.ಐ. ಓದುತ್ತಿರುವ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದ ನಿಯಮದಂತೆ ಪ್ರತಿ ಶೈಕ್ಷಣಿಕ ವರ್ಷದಲ್ಲಿ ವಾರ್ಷಿಕ ಮತ್ತು ಪುನರಾವರ್ತಿತ ಪರೀಕ್ಷೆ ನಡೆಸಲು ನಿಗದಿಪಡಿಸಿರುವ ಸಮಯ ಯಾವುದು;

(ಇ) ೨೦೧೪ನೇ ಸಾಲಿನಲ್ಲಿ ಐ.ಟಿ.ಐ. ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು;

(ಈ) ಐ.ಟಿ.ಐ. ವಿದ್ಯಾರ್ಥಿಗಳಿಗೆ ನಿಗದಿತ ಸಮಯದಲ್ಲಿ ಪರೀಕ್ಷೆ ನಡೆಸಿ, ಅವರು ಭವಿಷ್ಯ ರೂಪಿಸಿಕೊಳ್ಳುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ 1064– ಪ್ರತಿಗಳು (ಪಿ1)